# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 904 (1077)
2) ಸದಸ್ಯರ ಹೆಸರು : ಶ್ರೀ ಎನ್. ರವಿಕುಮಾರ್
(ವಿಧಾನ ಸಭೆಯಿಂದ ಚುನಾಯಿತರಾದವರು)
3) ಉತ್ತರಿಸುವ ದಿನಾಂಕ : 19.12.2018
4) ಉತ್ತರಿಸುವವರು : ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಅಗರ ಕೆರೆಯನ್ನು ಪುನರುಜ್ಜೀವನಗೊಳಿಸಲು ಆದ ವೆಚ್ಚವೆಷ್ಟು; ಈ ಮೊತ್ತವನ್ನು ಭರಿಸಿದವರು ಯಾರು; ಈ ಯೋಜನೆಯಲ್ಲಿ ಖಾಸಗಿ ಸಂಸ್ಥೆಗಳ ಪಾತ್ರವೇನು; ಅಗರ ಕೆರೆಯು ಯಾವ ಸುಪರ್ದಿಯಲ್ಲಿದೆ; | ಬೆಂಗಳೂರು ದಕ್ಷಿಣ ತಾಲ್ಲೂಕಿನ ಬೇಗೂರು ಹೋಬಳಿಯ ಅಗರ ಗ್ರಾಮಕ್ಕೆ ಸೇರಿದ ಒಟ್ಟು 97 ಎಕರೆ 32 ಗುಂಟೆ ಪ್ರದೇಶದಲ್ಲಿ ಅಗರ ಕೆರೆಯು ವ್ಯಾಪಿಸಿರುತ್ತದೆ. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದವರು 2002ರಲ್ಲಿ ರೂ.573.00 ಲಕ್ಷಗಳ ವೆಚ್ಚದಲ್ಲಿ ಕೆರೆಯ ಸುತ್ತಲ ಪ್ರದೇಶವನ್ನು ಅಭಿವೃದ್ಧಿ ಪಡಿಸಿರುತ್ತಾರೆ. ಈ ಕೆರೆಯು ಸರ್ಕಾರದ ಆದೇಶ ಸಂಖ್ಯೆ:ಅಪಜೀ 114 ಇಸಿಓ 2003, ದಿನಾಂಕ:26-02-2007ರ ಅನ್ವಯ ಕರ್ನಾಟಕ ಸರೋವರ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರಕ್ಕೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಹಸ್ತಾಂತರಗೊಂಡ ನಂತರ ಸದರಿಯವರು ಮುಂದಿನ ಅಭಿವೃದ್ಧಿ ಮತ್ತು ನಿರ್ವಹಣೆಗಾಗಿ ಟೆಂಡರ್ ಮಾಡಿM/s Biota Natural Systems Pvt., Ltd., Hyderabad ಇವರಿಗೆ ಖಾಸಗಿ ಮತ್ತು ಸರ್ಕಾರದ ಸಹಭಾಗಿತ್ವದ ಆಧಾರದಲ್ಲಿ 15 ವರ್ಷಗಳ ಅವಧಿಗೆ ದಿನಾಂಕ:10-04-2007ರಂದು ಕರಾರು ಒಪ್ಪಂದ ಮಾಡಿಕೊಂಡಿದ್ದು, ದಿನಾಂಕ10-04-2007 ರಿಂದ ಅನ್ವಯವಾಗುವಂತೆ ಸದರಿ ಖಾಸಗಿ ಸಂಸ್ಥೆಗೆ ವಹಿಸಲಾಗಿತ್ತು. ಸದರಿ ಗುತ್ತಿಗೆದಾರರು ಕರಾರಿನ ಗುತ್ತಿಗೆಯ ಷರತ್ತುಗಳನ್ನು ಉಲ್ಲಂಘನೆ ಮಾಡಿ ಗುತ್ತಿಗೆಯ ಮೊತ್ತವನ್ನು ಪಾವತಿಸಲು ವಿಫಲರಾದ ಕಾರಣ, ಅವರ ಗುತ್ತಿಗೆಯನ್ನು ದಿನಾಂಕ: 17-09-2009 ರಂದು ರದ್ದುಪಡಿಸಲಾಯಿತು. ಈ ಕಾರಣದಿಂದ ಸದರಿ ಗುತ್ತಿಗೆದಾರರು ಸಿವಿಲ್ ನ್ಯಾಯಾಲಯದಲ್ಲಿ ದಾವೆಯನ್ನು ಹೂಡಿದ್ದು, ಸದರಿ ದಾವೆಯಲ್ಲಿ ಪ್ರಾಧಿಕಾರದ ವಿರುದ್ಧ ತೀರ್ಪು ಬಂದ ಕಾರಣ, ಕರ್ನಾಟಕ ಸರೋವರ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರದವರು ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ಎಂ.ಎಫ್.ಎ ನಂ.3392/2018 ದಾವೆಯನ್ನು ದಾಖಲಿಸಿರುತ್ತಾರೆ. 2016-17ನೇ ಮತ್ತು 2017-18ರಲ್ಲಿ ಕರ್ನಾಟಕ ಸರೋವರ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರದವರು ರೂ.16.10 ಕೋಟಿ ವೆಚ್ಚದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಮಾಡಿಸಿರುತ್ತಾರೆ. ಪ್ರಸ್ತುತ ಸದರಿ ಕೆರೆಯು ಜುಲೈ 2018 ರಿಂದ ಅರಣ್ಯ ಇಲಾಖೆಯ ಸುಪರ್ದಿಯಲ್ಲಿರುತ್ತದೆ. |

| | | |
|---|---|---|
| ಆ) | ಅಗರ ಕೆರೆಯ ರಕ್ಷಣೆ ಮತ್ತು ನಿರ್ವಹಣೆಯನ್ನು ಖಾಸಗಿಯವರಿಗೆ ವಹಿಸಿಕೊಡುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ; ಇದ್ದಲ್ಲಿ ಖಾಸಗಿ ಸಂಸ್ಥೆಯವರೊಡನೆ ಸರ್ಕಾರ ಯಾವ ರೀತಿಯ ಒಪ್ಪಂದ ಮಾಡಿಕೊಂಡಿದೆ; | ಇರುವುದಿಲ್ಲ. |
| ಇ) | ನಿರ್ವಹಣೆಯ ಗುತ್ತಿಗೆ ವಹಿಸಿದ ಖಾಸಗಿ ಸಂಸ್ಥೆಯವರು ಈ ಕೆರೆಯ ಅಂಗಳದಲ್ಲಿ ವಾಣಿಜ್ಯ ಚಟುವಟಿಕೆಗಳನ್ನು ಕೈಗೊಳ್ಳಲು ಸಂಬಂಧ ಸರ್ಕಾರದೊಂದಿಗೆ ಒಪ್ಪಂದ ಮಾಡಿ ಕೊಂಡಿರುತ್ತಾರೆಯೇ; ವಾಣಿಜ್ಯ ಚಟುವಟಿಕೆಗಳನ್ನು ಕೈಗೊಳ್ಳಲು ಅರ್ಹ ಸಂಸ್ಥೆಗಳಿಂದ ಟೆಂಡರ್ ಆಹ್ವಾನಿಸಲಾಗಿದೆಯೇ; ಕೆರೆಗಳ ನಿರ್ವಹಣೆ ಎಂದರೆ ಅಮ್ಯುಸ್‌ಮೆಂಟ್ ಪಾರ್ಕ್ ನಿರ್ಮಾಣ ವಹಿಸಿಕೊಡುವಾಗ ಲಿಖಿತವಾಗಿ ತಿಳಿಸಲಾಗಿತ್ತೇ; | ಸರ್ಕಾರದ ಆದೇಶ ಸಂಖ್ಯೆ: ಅಪಜೀ 114 ಇಸಿಓ 2003 ದಿನಾಂಕ: 26-02-2007ರ ಅನ್ವಯ ಕರ್ನಾಟಕ ಸರೋವರ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರಕ್ಕೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಹಸ್ತಾಂತರಗೊಂಡ ನಂತರ ಅಭಿವೃದ್ಧಿ ಮತ್ತು ನಿರ್ವಹಣೆಗಾಗಿ ಟೆಂಡರ್ ಮಾಡಿ M/s Biota Natural Systems Pvt., Ltd., Hyderabad ಇವರಿಗೆ ಖಾಸಗಿ ಮತ್ತು ಸರ್ಕಾರದ ಸಹಭಾಗಿತ್ವದ ಆಧಾರದಲ್ಲಿ 15 ವರ್ಷಗಳ ಅವಧಿಗೆ ದಿನಾಂಕ:10-04-2007 ರಂದು ಕರಾರು ಒಪ್ಪಂದ ಮಾಡಿಕೊಂಡಿದ್ದು, ದಿನಾಂಕ 10-04-2007 ರಿಂದ ಅನ್ವಯವಾಗುವಂತೆ ಸದರಿ ಖಾಸಗಿ ಸಂಸ್ಥೆಗೆ ವಹಿಸಲಾಗಿತ್ತು. ಸದರಿ ಗುತ್ತಿಗೆದಾರರು ಕರಾರಿನ ಗುತ್ತಿಗೆಯ ಷರತ್ತುಗಳನ್ನು ಉಲ್ಲಂಘನೆ ಮಾಡಿ ಗುತ್ತಿಗೆಯ ಮೊತ್ತವನ್ನು ಪಾವತಿಸಲು ವಿಫಲರಾದ ಕಾರಣ, ಅವರ ಗುತ್ತಿಗೆಯನ್ನು ದಿನಾಂಕ: 17-09-2009 ರಂದು ರದ್ದುಪಡಿಸಲಾಯಿತು. ಈ ಕಾರಣದಿಂದ ಸದರಿ ಗುತ್ತಿಗೆದಾರರು ಸಿವಿಲ್ ನ್ಯಾಯಾಲಯದಲ್ಲಿ ದಾವೆಯನ್ನು ಹೂಡಿದ್ದು, ಸದರಿ ದಾವೆಯಲ್ಲಿ ಪ್ರಾಧಿಕಾರದ ವಿರುದ್ಧ ತೀರ್ಪು ಬಂದ ಕಾರಣ, ಕರ್ನಾಟಕ ಸರೋವರ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರದವರು ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ಎಂ.ಎಫ್.ಎ ನಂ.3392/2018 ದಾವೆಯನ್ನು ದಾಖಲಿಸಿರುತ್ತಾರೆ. ಇದರಿಂದಾಗಿ ಪ್ರಸ್ತುತ ಈ ಕೆರೆಯಲ್ಲಿ ಯಾವುದೇ ವಾಣಿಜ್ಯ ಚಟುವಟಿಕೆಗಳನ್ನು ಕೈಗೊಳ್ಳಲು ಟೆಂಡರ್ ಮಾಡಿರುವುದಿಲ್ಲ. |
| ಈ) | ಕೆರೆಯ ಅಂಗಳದಲ್ಲಿ ಅಮ್ಯುಸ್‌ಮೆಂಟ್ ಪಾರ್ಕ್ ನಿರ್ಮಿಸಲು ನಿಯಮದಲ್ಲಿ ಅವಕಾಶವಿದೆಯೇ; ಅಮ್ಯುಸ್‌ಮೆಂಟ್ ಪಾರ್ಕ್ ಅಥವಾ ಯಾವುದೇ ವಾಣಿಜ್ಯ ಚಟುವಟಿಕೆಗಳನ್ನು ಕೆರೆಯ ಅಂಗಳದಲ್ಲಿ ನಿರ್ವಹಿಸುವುದರಿಂದ ಕೆರೆಯ ನೈಸರ್ಗಿಕ ಪರಿಸರಕ್ಕೆ ಹಾನಿಯುಂಟಾಗುವುದು ಸರ್ಕಾರದ ಗಮನದಲ್ಲಿದೆಯೇ; ಈ ಕುರಿತು ಸರ್ಕಾರದ ನಿಲುವೇನು? | ಕರ್ನಾಟಕ ಕೆರೆ ಸಂರಕ್ಷಣಾ ಪ್ರಾಧಿಕಾರ ಅಧಿನಿಯಮ 2014 ಹಾಗೂ ಕರ್ನಾಟಕ ಕೆರೆ ಸಂರಕಣಾ ಪ್ರಾಧಿಕಾರ ಮತ್ತು ಕಾನೂನು (ತಿದ್ದುಪಡಿ) ಅಧಿನಿಯಮ, 2018ರ ಅನ್ವಯ ಯಾವುದೇ ಕೆರೆಗಳಲ್ಲಿ ವಾಣಿಜ್ಯ ಚಟುವಟಿಕೆಗಳನ್ನು ಕೈಗೊಳ್ಳಲು ಅವಕಾಶವಿರುವುದಿಲ್ಲ. ಪ್ರಸ್ತುತ ಕೆರೆಯ ಅಂಗಳದಲ್ಲಿ ಅಮ್ಯುಸ್‌ಮೆಂಟ್ ಪಾರ್ಕ್ ನಿರ್ಮಾಣದ ಉದ್ದೇಶ ಇರುವುದಿಲ್ಲ. ಅಮ್ಯುಸ್‌ಮೆಂಟ್ ಪಾರ್ಕ್ ಅಥವಾ ಯಾವುದೇ ವಾಣಿಜ್ಯ ಚಟುವಟಿಕೆಗಳನ್ನು ಕೆರೆಯ ಅಂಗಳದಲ್ಲಿ ನಡೆಸುವುದರಿಂದ ಕೆರೆಯ ನೈಸರ್ಗಿಕ ಪರಿಸರಕ್ಕೆ ಹಾನಿಯುಂಟಾಗುವುದರಿಂದ ಇದಕ್ಕೆ ಆಸ್ಪದ ನೀಡಲಾಗುವುದಿಲ್ಲ. |

ಸಂಖ್ಯೆ: ಅಪಜೀ 77 ಎಫ್‌ಟಿಎಸ್ 2018

(ಆರ್. ಶಂಕರ್)

ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು